**All India Radio: Bangalore**
**National Bulletin In Kannada**
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**10.02.2026** **7.35 pm**

*******************

ಮುಖ್ಯಾಂಶಗಳು

- ನವದೆಹಲಿಯಲ್ಲಿಂದು ಸೈಬರ್ ವಂಚನೆ ಕುರಿತ ರಾಷ್ಟ್ರೀಯ ಸಮ್ಮೇಳನ ಉದ್ಘಾಟಿಸಿದ ಕೇಂದ್ರ ಗೃಹ ಸಚಿವ ಅಮಿತ್ ಶಾ
- ದೇಶದಲ್ಲಿ ಒಟ್ಟು ೨೯ ಸಾವಿರಕ್ಕೂ ಹೆಚ್ಚು ಸಾರ್ವಜನಿಕ ವಿದ್ಯುತ್ ವಾಹನ ಚಾರ್ಜಿಂಗ್ ಕೇಂದ್ರಗಳ ಸ್ಥಾಪನೆ
- ಫ್ರಾನ್ಸ್ ಅಧ್ಯಕ್ಷ ಇಮ್ಯಾನ್ಯುಯಲ್ ಮ್ಯಾಕ್ರನ್ ಇದೇ ೧೭ ರಿಂದ ಮೂರು ದಿನಗಳ ಭಾರತ ಭೇಟಿ
- ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್; ಯುಎಇ ವಿರುದ್ಧ ನ್ಯೂಜಿಲೆಂಡ್ ತಂಡಕ್ಕೆ ೧೦ ವಿಕೆಟ್‌ಗಳ ಭರ್ಜರಿ ಗೆಲುವು

***************

ಸೈಬರ್ ವಂಚನೆ ಕುರಿತ ರಾಷ್ಟ್ರೀಯ ಸಮ್ಮೇಳನವನ್ನು ನವದೆಹಲಿಯಲ್ಲಿಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸೈಬರ್ ಭದ್ರತೆಯು ಈಗ ಸುರಕ್ಷತೆಗೆ ಸಂಬಂಧಿಸಿದ್ದಾಗಿದೆ. ದೇಶದಲ್ಲಿ ಸೈಬರ್ ಅಪರಾಧವನ್ನು ತಗ್ಗಿಸಲು ಅನೇಕ ಉಪಕ್ರಮಗಳನ್ನು ಪ್ರಾರಂಭಿಸಿದೆ. ಭಾರತೀಯ ಸೈಬರ್ ಅಪರಾಧ ಸಮನ್ವಯ ಕೇಂದ್ರ-೧೪ ಸಿ, ಸೈಬರ್ ಅಪರಾಧದ ವಿರುದ್ಧ ಪ್ರಮುಖ ವೇದಿಕೆಯಾಗಿದೆ. ದೇಶವಾಸಿಗಳಲ್ಲಿ ಸೈಬರ್ ಸುರಕ್ಷತೆಗೆ ಬಗ್ಗೆ ಹೆಚ್ಚಿನ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ಪ್ರತಿಪಾದಿಸಿದರು.

ಇದೇ ವೇಳೆ ಕೇಂದ್ರ ಗೃಹ ಸಚಿವರು, ಸಿಬಿಐ ನ ಹೊಸ ಸೈಬರ್ ಅಪರಾಧ ಶಾಖೆಯನ್ನು ಉದ್ಘಾಟಿಸಿದರು ಹಾಗೂ ಗೃಹ ವ್ಯವಹಾರಗಳ ಸಚಿವಾಲಯದ ರಾಜ್ಯ ಸೈಬರ್ ಅಪರಾಧ ಸಮನ್ವಯ ಕೇಂದ್ರದ ಡ್ಯಾಶ್‌ಬೋರ್ಡ್ ಅನ್ನು ಲೋಕಾರ್ಪಣೆಗೊಳಿಸಿದರು.

ಎರಡು ದಿನಗಳ ಈ ಸಮ್ಮೇಳನವನ್ನು ಕೇಂದ್ರ ತನಿಖಾ ದಳ-ಸಿಬಿಐ, ಗೃಹ ವ್ಯವಹಾರಗಳ ಸಚಿವಾಲಯ, ಭಾರತೀಯ ಸೈಬರ್ ಅಪರಾಧ ಸಮನ್ವಯ ಕೇಂದ್ರದ ಸಹಯೋಗದೊಂದಿಗೆ ಆಯೋಜಿಸಲಾಗಿದೆ.

***************

ದೇಶದಲ್ಲಿ ಒಟ್ಟು ೨೯ ಸಾವಿರಕ್ಕೂ ಹೆಚ್ಚು ಸಾರ್ವಜನಿಕ ವಿದ್ಯುತ್ ವಾಹನ ಚಾರ್ಜಿಂಗ್ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ಕೇಂದ್ರ ಭಾರೀ ಕೈಗಾರಿಕೆಗಳ ಖಾತೆ ರಾಜ್ಯ ಸಚಿವ ಭೂಪತಿರಾಜು ಶ್ರೀನಿವಾಸ ವರ್ಮ ಮಾಹಿತಿ ನೀಡಿದ್ದಾರೆ.

ಲೋಕಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಅವರು, ದೇಶಾದ್ಯಂತ ಸಾರ್ವಜನಿಕ ವಿದ್ಯುತ್ ಚಾರ್ಜಿಂಗ್ ಮೂಲಸೌಕರ್ಯಗಳಿಗಾಗಿ ಕೇಂದ್ರ ಸರ್ಕಾರವು ಎಫ್‌ಎಎಂಇ-೨ ಅಡಿಯಲ್ಲಿ ೯೧೨ ಕೋಟಿ ರೂಪಾಯಿಗಳನ್ನು ಹಾಗೂ ಪಿಎಂ ಇ-ಡ್ರೈವ್ ಯೋಜನೆಯಡಿ ೨ ಸಾವಿರ ಕೋಟಿ ರೂಪಾಯಿಯನ್ನು ಹಂಚಿಕೆ ಮಾಡಿದೆ ಎಂದು ತಿಳಿಸಿದರು.

ಪಿಎಂ ಇ-ಡ್ರೈವ್ ಯೋಜನೆಯಡಿ ಸಚಿವಾಲಯವು ಕಳೆದ ವರ್ಷ ವಿದ್ಯುತ್ ವಾಹನಗಳ ಸಾರ್ವಜನಿಕ ಚಾರ್ಜಿಂಗ್ ಕೇಂದ್ರಗಳ ನಿಯೋಜನೆಗಾಗಿ ಕಾರ್ಯಾಚರಣೆಯ ಮಾರ್ಗಸೂಚಿಗಳನ್ನು ಬಿಡುಗಡೆ ಮಾಡಿದೆ ಎಂದು ಸಚಿವ ಭೂಪತಿರಾಜು ಶ್ರೀನಿವಾಸ ವರ್ಮ ಹೇಳಿದರು.

***************

ಪಿಎಂ ಕಿಸಾನ್ ಯೋಜನೆ ಆರಂಭವಾದಾಗಿನಿಂದ ಕೇಂದ್ರ ಸರ್ಕಾರ ೨೧ ಕಂತುಗಳಲ್ಲಿ ೪ ಲಕ್ಷ ಕೋಟಿ ರೂಪಾಯಿಗಳಿಗೂ ಹೆಚ್ಚಿನ ಮೊತ್ತವನ್ನು ವಿತರಿಸಿದೆ ಎಂದು ಕೇಂದ್ರ ಕೃಷಿ ಖಾತೆ ರಾಜ್ಯ ಸಚಿವ ರಾಮ್‌ನಾಥ್ ಠಾಕೂರ್ ತಿಳಿಸಿದ್ದಾರೆ.

ಲೋಕಸಭೆಯಲ್ಲಿಂದು ಪ್ರಶ್ನೊಂದಕ್ಕೆ ಲಿಖಿತ ಉತ್ತರ ನೀಡಿದ ಅವರು, ರೈತರ ಆರ್ಥಿಕ ಅಗತ್ಯಗಳನ್ನು ಪೂರೈಸಲು ೨೦೧೯ರ ಫೆಬ್ರವರಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಪಿಎಂ ಕಿಸಾನ್ ಯೋಜನೆಯನ್ನು ಘೋಷಿಸಿದರು. ಈ ಯೋಜನೆಯಡಿ ವರ್ಷಕ್ಕೆ ೬ ಸಾವಿರ ರೂಪಾಯಿಗಳ ಆರ್ಥಿಕ ಪ್ರಯೋಜನಗಳನ್ನು ಮೂರು ಸಮಾನ ಕಂತುಗಳಲ್ಲಿ ವರ್ಗಾಯಿಸಲಾಗುತ್ತದೆ ಎಂದು ವಿವರಿಸಿದರು.

ರೈತ ಕೇಂದ್ರೀತ ಡಿಜಿಟಲ್ ಮೂಲಸೌಕರ್ಯವು, ಯೋಜನೆಯ ಪ್ರಯೋಜನಗಳು ಯಾವುದೇ ಮಧ್ಯವರ್ತಿಗಳ ಒಳಗೊಳ್ಳುವಿಕೆ ಇಲ್ಲದೆ, ದೇಶಾದ್ಯಂತ ಎಲ್ಲಾ ರೈತರನ್ನು ತಲುಪುವುದನ್ನು ಖಚಿತಪಡಿಸಿದೆ. ಯೋಜನೆಯಡಿ ಎಲ್ಲಾ ಪಾವತಿಗಳನ್ನು ಫಲಾನುಭವಿಗಳ ಆಧಾರ್ ಸಂಪರ್ಕಿತ ಬ್ಯಾಂಕ್ ಖಾತೆಗಳಿಗೆ ನೇರ ವರ್ಗಾವಣೆ ಮಾಡಲಾಗುತ್ತದೆ ಎಂದು ರಾಮ್‌ನಾಥ್ ಠಾಕೂರ್ ಹೇಳಿದರು.

***************

ಪ್ರಧಾನಿ ನರೇಂದ್ರ ಮೋದಿ ಅವರ ಆಹ್ವಾನದ ಮೇರೆಗೆ ಫ್ರಾನ್ಸ್ ಅಧ್ಯಕ್ಷ ಇಮ್ಯಾನುಯಲ್ ಮ್ಯಾಕ್ರನ್ ಇದೇ ೧೭ ರಿಂದ ಮೂರು ದಿನಗಳ ಕಾಲ ಭಾರತಕ್ಕೆ ಅಧಿಕೃತ ಭೇಟಿ ನೀಡಲಿದ್ದಾರೆ.

ಇದೇ ೧೯ ರಂದು ನವದೆಹಲಿಯಲ್ಲಿ ನಡೆಯಲಿರುವ ಎಐ ಇಂಪ್ಯಾಕ್ಟ್ ಶೃಂಗಸಭೆಯಲ್ಲಿ ಅವರು ಭಾಗವಹಿಸಲಿದ್ದಾರೆ. ಭೇಟಿಯ ಸಮಯದಲ್ಲಿ ಉಭಯ ನಾಯಕರು ವಿವಿಧ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರ ಬಲಪಡಿಸುವ ಕುರಿತು ಚರ್ಚೆ ನಡೆಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

ಇಂಡೋ-ಪೆಸಿಫಿಕ್ ಸಹಕಾರ ಸೇರಿದಂತೆ ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ಸಮಸ್ಯೆಗಳ ಕುರಿತು ಉಭಯ ನಾಯಕರು ಚರ್ಚಿಸಲಿದ್ದಾರೆ. ಅಲ್ಲದೇ, ಮುಂಬೈನಲ್ಲಿ ನಡೆಯುವ ಸಮಾರಂಭದಲ್ಲಿ ಭಾರತ-ಫ್ರಾನ್ಸ್ ನಾವೀನ್ಯತೆ ವರ್ಷವನ್ನು ಜಂಟಿಯಾಗಿ ಉದ್ಘಾಟಿಸಲಿದ್ದಾರೆ ಎಂದು ಸಚಿವಾಲಯ ಮಾಹಿತಿ ನೀಡಿದೆ.

ಕಳೆದ ವರ್ಷ ಫೆಬ್ರವರಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಫ್ರಾನ್ಸ್‌ಗೆ ಭೇಟಿ ನೀಡಿದ್ದರು.

***************

ವಿಕಸಿತ ಭಾರತದೆಡೆಗೆ ದೇಶದ ಪ್ರಯಾಣದ ನಿಟ್ಟಿನಲ್ಲಿ ನೀತಿ ಆಯೋಗ ನವದೆಹಲಿಯಲ್ಲಿ ಇಂದು ನಾಲ್ಕು ಅಧ್ಯಯನ ವರದಿಗಳನ್ನು ಬಿಡುಗಡೆ ಮಾಡಿದೆ. ಈ ವರದಿಗಳು ವಿದ್ಯುತ್, ಸಾರಿಗೆ, ಕೈಗಾರಿಕೆ ಮತ್ತು ನಿರ್ಣಾಯಕ ಖನಿಜಗಳ ವಲಯವಾರು ಒಳನೋಟಗಳ ಮೇಲೆ ಕೇಂದ್ರೀಕರಿಸಿದೆ.

ಈ ಸಂದರ್ಭದಲ್ಲಿ ಮಾತನಾಡಿದ ನೀತಿ ಆಯೋಗದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ವಿ.ಆರ್.ಸುಬ್ರಹ್ಮಣ್ಯಂ, ಭಾರತದ ನಿವ್ವಳ ಶೂನ್ಯ ಗುರಿಗಳನ್ನು ಸಾಧಿಸಲು ಸಂಘಟಿತ ಮತ್ತು ದೀರ್ಘಕಾಲಿನ ಕಾರ್ಯತಂತ್ರದ ಅಗತ್ಯವಿದೆ. ಪರಿಸರ ಸುಸ್ಥಿರತೆಯೊಂದಿಗೆ ಆರ್ಥಿಕ ಬೆಳವಣಿಗೆಯನ್ನು ಸಮತೋಲಿತಗೊಳಿಸಲು ಪುರಾವೆ ಆಧಾರಿತ ನೀತಿ ನಿರೂಪಣೆ ಮತ್ತು ವಲಯ ನಿರ್ದಿಷ್ಟ ಯೋಜನೆ ಅತ್ಯಗತ್ಯ ಎಂದು ಹೇಳಿದರು.

೨೦೭೦ರಲ್ಲೂ ಸಹ ಪಳೆಯುಳಿಕೆ ಇಂಧನಗಳು ಕೈಗಾರಿಕಾ ಬಳಕೆಯ ಸುಮಾರು ನಾಲ್ಕನೇ ಒಂದು ಭಾಗವಾಗಿ ಉಳಿಯುತ್ತವೆ. ಇದನ್ನು ವಿವಿಧ ತಂತ್ರಜ್ಞಾನಗಳ ಮೂಲಕ ನಿರ್ವಹಿಸಬೇಕಿದೆ ಎಂದು ಅವರು ತಿಳಿಸಿದರು.

***************

ಜರ್ಮನಿಯ ನ್ಯೂರೆಂಬರ್ಗ್‌ನಲ್ಲಿ ನಡೆದ ವಿಶ್ವದ ಪ್ರಮುಖ ಸಾವಯವ ಉತ್ಪನ್ನಗಳ ವ್ಯಾಪಾರ ಮೇಳ- 'ಬಯೋಫಾಕ್ ೨೦೨೪'ರಲ್ಲಿ ಭಾರತಕ್ಕೆ ಪ್ರತಿಷ್ಠಿತ ವಾರ್ಷಿಕ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

೧೪ ವರ್ಷಗಳ ನಂತರ ಭಾರತಕ್ಕೆ ಜಾಗತಿಕ ಸಾವಯವ ಕೃಷಿ ಕ್ಷೇತ್ರದಲ್ಲಿ ಈ ಪ್ರತಿಷ್ಠಿತ ಪ್ರಶಸ್ತಿ ಲಭಿಸಿದೆ. ಇದೇ ೧೩ರವರೆಗೆ ಈ ಮೇಳ ಜರುಗಲಿದೆ.

ಕೃಷಿ ಮತ್ತು ಸಂಸ್ಕರಿಸಿದ ಆಹಾರ ಉತ್ಪನ್ನಗಳ ರಫ್ತು ಅಭಿವೃದ್ಧಿ ಪ್ರಾಧಿಕಾರ ಈ ಮೇಳವನ್ನು ಆಯೋಜಿಸಿದೆ. ಈ ಮೇಳದಲ್ಲಿ ಭಾರತ ಭಾಗವಹಿಸಿದ್ದು, ಇದು ದೇಶದ ಶ್ರೀಮಂತ ಕೃಷಿ ಪರಂಪರೆ ಮತ್ತು ಸಾವಯವ ಉತ್ಪನ್ನಗಳ ಪ್ರಮುಖ ಜಾಗತಿಕ ಪೂರೈಕೆದಾರರಾಗಿ ಅದರ ಶಕ್ತಿಯನ್ನು ಪ್ರತಿಬಿಂಬಿಸುತ್ತದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ ತಿಳಿಸಿದೆ.

ಭಾರತದ ಮಳಿಗೆಯಲ್ಲಿ ಅಕ್ಕಿ, ಎಣ್ಣೆ ಬೀಜಗಳು, ಗಿಡಮೂಲಿಕೆಗಳು, ಮಸಾಲೆ ಪದಾರ್ಥಗಳು, ದ್ವಿದಳ ಧಾನ್ಯಗಳು, ಗೋಡಂಬಿ, ಶುಂಠಿ, ಏಲಕ್ಕಿ, ದಾಲ್‌ಚಿನ್ನಿ ಸೇರಿದಂತೆ ಸಾವಯವ ಉತ್ಪನ್ನಗಳನ್ನು ಪ್ರದರ್ಶಿಸಲಾಗುತ್ತಿದೆ. ದೇಶದ ೨೦ಕ್ಕೂ ಹೆಚ್ಚು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಪ್ರದರ್ಶಕರು, ಈ ಮಳಿಗೆಯಲ್ಲಿ ತಮ್ಮ ಉತ್ಪನ್ನಗಳನ್ನು ಪ್ರದರ್ಶಿಸಲಿದ್ದಾರೆ ಎಂದು ಸಚಿವಾಲಯ ಮಾಹಿತಿ ನೀಡಿದೆ.

***************

ದೇಶದ ವಿವಿಧ ಭಾಗಗಳಿಂದ ಮಕ್ಕಳು ಕಾಣೆಯಾಗುವ ಘಟನೆಗಳ ಹಿಂದೆ ರಾಷ್ಟ್ರವ್ಯಾಪಿ ಜಾಲ ಅಥವಾ ರಾಜ್ಯ ನಿರ್ದಿಷ್ಟ ಗುಂಪು ಇದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳುವಂತೆ ಕೇಂದ್ರ ಸರ್ಕಾರಕ್ಕೆ ಸುಪ್ರೀಂಕೋರ್ಟ್ ಇಂದು ಕೇಳಿದೆ.

ಈ ಕುರಿತು ಎನ್‌ಜಿಒ ಒಂದು ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಬಿ.ವಿ.ನಾಗರತ್ನ ಮತ್ತು ಉಜ್ಜಲ್ ಭೂಯಾನ್ ಅವರಿದ್ದ ನ್ಯಾಯಪೀಠ, ಎಲ್ಲಾ ರಾಜ್ಯಗಳ ದತ್ತಾಂಶವನ್ನು ಒಟ್ಟುಗೂಡಿಸುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದೆ.

ಕೆಲವು ರಾಜ್ಯಗಳು ಕಾಣೆಯಾದ ಮಕ್ಕಳು ಮತ್ತು ಪ್ರಕರಣಗಳಲ್ಲಿ ಕೈಗೊಂಡ ಕಾನೂನು ಕ್ರಮಗಳ ಕುರಿತು ದತ್ತಾಂಶವನ್ನು ಹಂಚಿಕೊಂಡಿವೆ. ಆದರೆ, ಕೆಲವು ರಾಜ್ಯಗಳು ಈ ದತ್ತಾಂಶವನ್ನು ಹಂಚಿಕೊಂಡಿಲ್ಲ. ಕೂಡಲೇ ಎಲ್ಲಾ ರಾಜ್ಯಗಳಿಂದ ಸಂಪೂರ್ಣ ದತ್ತಾಂಶವನ್ನು ಕಲೆಹಾಕಿ, ನಂತರ ಕೇಂದ್ರ ಸರ್ಕಾರ ಅದರ ವಿಶ್ಲೇಷಣೆ ಮಾಡಬಹುದು ಎಂದು ನ್ಯಾಯಪೀಠ ಹೇಳಿದೆ.

***************

ದೆಹಲಿಯ ಅರುಣ್ ಜೇಟ್ಲಿ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆದ ಐಸಿಸಿ ಟಿ-೨೦ ವಿಶ್ವಕಪ್ ಪಂದ್ಯಾವಳಿಯ ಎ ಗುಂಪಿನ ೧೦ನೇ ಪಂದ್ಯದಲ್ಲಿ ನಮಿಬಿಯಾ ವಿರುದ್ಧ ನೆದರ್‌ಲ್ಯಾಂಡ್ಸ್ ತಂಡ ೭ ವಿಕೆಟ್‌ಗಳ ಜಯ ಸಾಧಿಸಿದೆ.

ಮೊದಲು ಬ್ಯಾಟಿಂಗ್ ಮಾಡಿದ ನಮಿಬಿಯಾ ನಿಗದಿತ ೨೦ ಓವರ್‌ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೧೫೬ ರನ್ ಗಳಿಸಿತು. ಗೆಲುವಿನ ಗುರಿಯನ್ನು ಬೆನ್ನತ್ತಿದ ನೆದರ್‌ಲ್ಯಾಂಡ್ಸ್ ೧೮ ಓವರ್‌ಗಳಲ್ಲಿ ೩ ವಿಕೆಟ್ ನಷ್ಟಕ್ಕೆ ೧೫೯ ರನ್ ಗಳಿಸಿ ಗೆಲುವಿನ ನಗೆ ಬೀರಿತು.

ಇದೇ ವೇಳೆ, ಚೆನ್ನೈನ ಎಂ.ಎ.ಚಿದಂಬರಂ ಕ್ರೀಡಾಂಗಣದಲ್ಲಿ ಇಂದು ನಡೆದ ಡಿ ಗುಂಪಿನ ೧೧ನೇ ಪಂದ್ಯದಲ್ಲಿ ಯುಎಇ ವಿರುದ್ಧ ನ್ಯೂಜಿಲೆಂಡ್ ತಂಡ ೧೦ ವಿಕೆಟ್‌ಗಳಿಂದ ಭರ್ಜರಿ ಗೆಲುವು ದಾಖಲಿಸಿದೆ.

ಮೊದಲು ಬ್ಯಾಟಿಂಗ್ ಮಾಡಿದ ಯುಎಇ ತಂಡ ನಿಗದಿತ ೨೦ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೧೭೩ ರನ್ ಗಳಿಸಿದೆ. ಗೆಲುವಿನ ಗುರಿ ಬೆನ್ನತ್ತಿರುವ ನ್ಯೂಜಿಲೆಂಡ್ ೧೫.೨ ಓವರ್‌ಗಳಲ್ಲಿ ಯಾವುದೇ ವಿಕೆಟ್ ನಷ್ಟವಿಲ್ಲದೇ, ೧೭೫ ರನ್ ಗಳಿಸಿ ಸುಲಭ ಜಯ ಸಾಧಿಸಿತು.

ಇನ್ನೊಂದೆಡೆ, ಕೊಲಂಬೊದ ಸಿನ್ಹಳೀಸ್ ಸ್ಪೋರ್ಟ್ಸ್ ಕ್ಲಬ್ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಎ ಗುಂಪಿನ ೧೨ನೇ ಪಂದ್ಯದಲ್ಲಿ ಪಾಕಿಸ್ತಾನ ಮತ್ತು ಯುಎಸ್‌ಎ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಯುಎಸ್‌ಎ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

***************

ನವದೆಹಲಿಯಲ್ಲಿ ಇಂದು ನಡೆದ ಏಷ್ಯನ್ ರೈಫಲ್ ಶೂಟಿಂಗ್ ಚಾಂಪಿಯನ್‌ಶಿಪ್‌ನ ಮಹಿಳೆಯರ ೫೦ ಮೀಟರ್ ರೈಫಲ್ ತ್ರಿ ಪೊಸಿಶನ್ ಸ್ಪರ್ಧೆಯಲ್ಲಿ ಭಾರತದ ಆಕೃತಿ ದಹಿಯಾ ೩೫೪.೨ ಅಂಕಗಳೊಂದಿಗೆ ಬೆಳ್ಳಿ ಪದಕ ವಿಜೇತರಾಗಿದ್ದಾರೆ.

ಈ ಸ್ಪರ್ಧೆಯಲ್ಲಿ ಕಜಕಿಸ್ತಾನದ ಸೋಫಿಯಾ ಚಿನ್ನ ಗೆದ್ದರೆ, ಭಾರತದ ಅಂಜುಮ್ ಮೌದ್ಗಿಲ್ ೩೪೦.೪ ಅಂಕಗಳೊಂದಿಗೆ ಕಂಚಿನ ಪದಕ ಪಡೆದಿದ್ದಾರೆ.

ಇದೇ ವೇಳೆ ಮಹಿಳೆಯರ ೫೦ ಮೀಟರ್ ರೈಫಲ್ ತ್ರಿ ಪೊಸಿಶನ್ ತಂಡ ಸ್ಪರ್ಧೆಯಲ್ಲಿ ಆಕೃತಿ ದಹಿಯಾ, ಅಂಜುಮ್ ಮೌದ್ಗಿಲ್ ಮತ್ತು ಆಶಿ ಚೌಕ್ಸಿ ಅವರನ್ನು ಒಳಗೊಂಡ ಭಾರತ ಮಹಿಳಾ ತಂಡ ಒಟ್ಟು ೧ ಸಾವಿರದ ೭೫೬ ಅಂಕಗಳೊಂದಿಗೆ ಬೆಳ್ಳಿ ಪದಕ ಗೆದ್ದಿದೆ. ಕಜಕಿಸ್ತಾನ ತಂಡ ಒಟ್ಟು ೧ ಸಾವಿರದ ೭೬೦ ಅಂಕಗಳೊಂದಿಗೆ ಚಿನ್ನದ ಪದಕ ವಿಜೇತವಾಗಿದೆ.

********ಮುಕ್ತಾಯ*******